# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 926 |
| ಸದಸ್ಯರ ಹೆಸರು | : | ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 14.07.2023 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಗಳನ್ನು ಮೇಲ್ದರ್ಜೆಗೇರಿಸಿ ಆದೇಶ ಹೊರಡಿಸಲಾಗಿದ್ದರೂ ಇದುವರೆಗೂ ಅನುಷ್ಠಾನ ಮಾಡದಿರಲು ಕಾರಣಗಳೇನು; | ಸರ್ಕಾರದ ಆದೇಶ ಸಂಖ್ಯೆ: RDPR 29 GPS 2021, ದಿನಾಂಕ:09-11-2022 ರಲ್ಲಿ 1500 ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳನ್ನು ಹಿರಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳೆಂದು ಉನ್ನತೀಕರಿಸಿ ಮರುಪದನಾಮೀಕರಿಸಿ ಆದೇಶ ಹೊರಡಿಸಲಾಗಿದೆ.<br><br>ಹಿರಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಕಾರ್ಯಕಾರಿ ಆದೇಶದ ಮೂಲಕ ನೇಮಕಾತಿ ವಿಧಾನವನ್ನು ನಿರ್ದಿಷ್ಟಪಡಿಸಲಾಗಿದೆ. ಸದರಿ ವೃಂದಕ್ಕೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರೂಪಿಸಲಾಗುತ್ತಿದ್ದು, ವೃಂದ ಮತ್ತು ನೇಮಕಾತಿ ನಿಯಮಗಳು, ರಚನೆಯಾದ ನಂತರ 1500 ಹಿರಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು. |
| (ಆ) | ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆ ಮೇಲ್ದರ್ಜೆಗೇರಿಸಲು ಇರುವ ತೊಡಕುಗಳನ್ನು ನಿವಾರಿಸಿ ಕೂಡಲೇ ಕಾರ್ಯಗತ ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ; | |
| (ಇ) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಅಭಿವೃದ್ಧಿ ಇಲಾಖೆಯಲ್ಲಿ ಮಂಜೂರಾಗಿರುವ ಒಟ್ಟು ಸಹಾಯಕ ನಿರ್ದೇಶಕರ ಹುದ್ದೆಗಳೆಷ್ಟು; ಆಡಳಿತಾತ್ಮಕ ಯೋಜನೆಗಳ ಮೇಲುಸ್ತುವಾರಿಗಾಗಿ ಹೆಚ್ಚುವರಿ ಸಹಾಯಕ ನಿರ್ದೇಶಕರ ಹುದ್ದೆಗಳ ಸೃಜನೆಯ ಪ್ರಸ್ತಾವನೆ/ಬೇಡಿಕೆ ಸರ್ಕಾರದ ಮುಂದಿದೆಯೇ? | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಮಂಜೂರಾಗಿರುವ ಸಹಾಯಕ ನಿರ್ದೇಶಕರ ಹುದ್ದೆಗಳ ವಿವರ ಈ ಕೆಳಕಂಡಂತಿದೆ.<br><br>1) ಸಹಾಯಕ ನಿರ್ದೇಶಕರು(ಗ್ರಾಮೀಣ ಉದ್ಯೋಗ)-233.<br>2) ಸಹಾಯಕ ನಿರ್ದೇಶಕರು(ಪಂಚಾಯತ್ ರಾಜ್)-226.<br>3) ಸಹಾಯಕ ನಿರ್ದೇಶಕರು(ಆಡಳಿತ)-31<br><br>ಸದ್ಯಕ್ಕೆ ಹೆಚ್ಚುವರಿಯಾಗಿ ಸಹಾಯಕ ನಿರ್ದೇಶಕ ಹುದ್ದೆಗಳನ್ನು ಸೃಜಿಸುವ ಪ್ರಸ್ತಾಪ ಇರುವುದಿಲ್ಲ. |
| (ಈ) | ಖಾಲಿಯಿರುವ ಸಹಾಯಕ ನಿರ್ದೇಶಕ ಹುದ್ದೆಗಳಿಗೆ ಪದೋನ್ನತಿ ನೀಡಲು ಇರುವ ತೊಡಕುಗಳೇನು; | ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದಕ್ಕೆ ಮೀಸಲಿರಿಸಿದ ಎಲ್ಲಾ ಸಹಾಯಕ ನಿರ್ದೇಶಕ ಹುದ್ದೆಗಳನ್ನು ಮುಂಬಡ್ತಿ ಮೂಲಕ ಭರ್ತಿ ಮಾಡಲಾಗಿದೆ.<br><br>ಸಹಾಯಕ ಯೋಜನಾಧಿಕಾರಿ-2 ಎಂಬ ಪದನಾಮದಿಂದ ಸಹಾಯಕ ನಿರ್ದೇಶಕ(ಆಡಳಿತ) ಎಂದು ಮರು ಪದನಾಮೀಕರಣಗೊಂಡಿರುವ ಹುದ್ದೆಗೆ ಅಧೀಕ್ಷಕ ವೃಂದದಿಂದ ಮುಂಬಡ್ತಿ |
| (ಉ) | ಖಾಲಿ ಹುದ್ದೆಗಳಿಗೆ ಪದೋನ್ನತಿ ನೀಡುವ ಸಂಬಂಧ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? | |

| | | |
|---|---|---|
| | | ನೀಡಲು ಅವಕಾಶ ಕಲ್ಪಿಸಿದ್ದು, ಮಂಜೂರಾಗಿರುವ 31 ಹುದ್ದೆಗಳ ಪೈಕಿ 30 ಹುದ್ದೆಗಳನ್ನು ಮುಂಬಡ್ತಿ ಮೂಲಕ ಭರ್ತಿ ಮಾಡಲಾಗಿದೆ.<br><br>ಮಾತ್ರು ವೃಂದಕ್ಕೆ ಸೇರಿದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದದ ದಿನಾಂಕ: 21-02-2014 ರ ಜೇಷ್ಠತಾ ಪಟ್ಟಿಯನ್ನು ಪ್ರಶ್ನಿಸಿ ಕರ್ನಾಟಕ ಉಚ್ಛ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 33613/2019 ಹಾಗೂ ತತ್ಸಂಬಂಧಿತ ಅರ್ಜಿಗಳು ದಾಖಲಾಗಿರುವುದರಿಂದ ಈ ವೃಂದದ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಮುಂಬಡ್ತಿ ನೀಡಲು ಸಾಧ್ಯವಾಗಿರುವುದಿಲ್ಲ.<br><br>ಪ್ರಸ್ತುತ ಮಾನ್ಯ ಉಚ್ಛ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ-33613/2019 ಹಾಗೂ ತತ್ಸಂಬಂಧಿತ ಪ್ರಕರಣಗಳಲ್ಲಿ ದಿನಾಂಕ-22.06.2023 ರಂದು ಆದೇಶ ನೀಡಿ ಮೂಲ ವೃಂದದ ಜೇಷ್ಠತಾ ಪಟ್ಟಿಯಲ್ಲಿದ್ದ ಆಕ್ಷೇಪಣೆಗಳನ್ನು ಪರಿಶೀಲಿಸಿ, ಜೇಷ್ಠತಾ ಪಟ್ಟಿಯನ್ನು ಸಿದ್ಧಪಡಿಸಲು ಸಮಿತಿ ರಚಿಸುವಂತೆ ತಿಳಿಸಿರುತ್ತದೆ. ಈ ಆದೇಶದಲ್ಲಿನ ತೀರ್ಪಿನ ಬಗ್ಗೆ ನಿಯಮಾನುಸಾರ ಪರಿಶೀಲಿಸಿ ಅಗತ್ಯ ಕ್ರಮ ವಹಿಸಲಾಗುವುದು. |

ಸಂಖ್ಯೆ:RDPR 315 GPA 2023

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.